ಕರ್ನಾಟಕ ಸರ್ಕಾರ

# ಭ್ರಷ್ಟಾಚಾರ ನಿಗ್ರಹ ದಳ

ದಿನಾಂಕ: 21.12.2018

## ಪತ್ರಿಕಾ ಪ್ರಕಟಣೆ

ಬೆಂಗಳೂರು ನಗರದ ನಿವಾಸಿಯೊಬ್ಬರ ವಿರುದ್ಧ ಸಂಪಂಗಿರಾಮನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ನ್ಯಾಯಾಲಯಕ್ಕೆ 'ಬಿ'ಅಂತಿಮ ವರದಿ ಸಲ್ಲಿಸಲು ಶ್ರೀ ಕೃಷ್ಣ ಪೊಲೀಸ್ ಇನ್ಸ್‌ಪೆಕ್ಟರ್ ರವರು ಅವರ ಠಾಣೆಯ ಸಿಬ್ಬಂದಿಯವರ ಮುಖಾಂತರ ರೂ.1,00,000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ: 21-12-2018 ರಂದು ಶ್ರೀ ಮಂಗಳೇಶ್ ಪೊಲೀಸ್ ಹೆಡ್ ಕಾನ್ಸ್‌ಸ್ಟೇಬಲ್ ರವರು ದೂರುದಾರರಿಂದ ರೂ.60,000/- ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿರುತ್ತಾರೆ. ಶ್ರೀ ಕೃಷ್ಣ ಪೊಲೀಸ್ ಇನ್ಸ್‌ಪೆಕ್ಟರ್, ಸಂಪಂಗಿರಾಮನಗರ ಪೊಲೀಸ್ ಠಾಣೆ (ಎಸ್.ಆರ್.ನಗರ), ಶ್ರೀ ಮಂಗಳೇಶ್ ಪೊಲೀಸ್ ಹೆಡ್ ಕಾನ್ಸ್‌ಸ್ಟೇಬಲ್‌ರವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ಅಮಾನತ್ತು ಪಡಿಸಿಕೊಳ್ಳಲಾಗಿದೆ. ಆಪಾದಿತರನ್ನು ದಸ್ತಗಿರಿ ಮಾಡಿದ್ದು ಪ್ರಕರಣದ ತನಿಖೆ ಮುಂದುವರೆದಿದೆ.